ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ನಗರಸಭೆಯ ವ್ಯಾಪ್ತಿಯಲ್ಲಿ ಮನೆಗಳನ್ನು ಕಟ್ಟಲು ಪರವಾನಿಗೆ ಪಡೆಯಲು ಇರುವ ಮಾನದಂಡಗಳ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ. ಪಿ.(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1076 (1144) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಗರಸಭೆ ವ್ಯಾಪ್ತಿಯಲ್ಲಿ ಮನೆಗಳನ್ನು ಕಟ್ಟಲು ನಗರಸಭೆಯಲ್ಲಿ ಪರವಾನಿಗೆ ಪಡೆಯಲು ಇರುವ ಮಾನದಂಡಗಳೇನು ; ಅರ್ಜಿಯನ್ನು ಸಲ್ಲಿಸಿದ ಎಷ್ಟು ದಿನಗಳಲ್ಲಿ ಪರವಾನಿಗೆ ಪತ್ರವನ್ನು ನೀಡಲಾಗುವುದು ;

(ಆ) ಇದರ ಕಾರ್ಯವಿಧಾನಗಳೇನು ; ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಲು ಆಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) 2019-20ನೇ ಸಾಲಿನಲ್ಲಿ ಕೊಡಗು ಜಿಲ್ಲೆ, ಮಡಿಕೇರಿ ನಗರಸಭೆ ವತಿಯಿಂದ ಇಲ್ಲಿಯವರೆವಿಗೂ ನೀಡಿರುವ ಕಟ್ಟಡ ಪರವಾನಿಗಳ ಸಂಖ್ಯೆ ಎಷ್ಟು ; ಅವುಗಳನ್ನು ಎಷ್ಟು ದಿನಗಳಲ್ಲಿ ನೀಡಲಾಗಿದೆ ? (ವಿವರ ನೀಡುವುದು)